ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು	:	ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:	:	774
ಉತ್ತರಿಸಬೇಕಾದ ಸಚಿವರು	:	ಮಾನ್ಯ ಕೃಷಿ ಸಚಿವರು
ಉತ್ತರಿಸಬೇಕಾದ ದಿನಾಂಕ	:	17-09-2021.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ವಿವಿಧ ವೃಂದದ ಹುದ್ದೆಗಳ ನೇಮಾಕಾತಿಗಾಗಿ ಆರ್ಥಿಕ ಇಲಾಖೆಯ ಅನುಮೋದನೆಗೆ ಪ್ರಸ್ತಾವನೆ ಬಂದಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ;	ಹೌದು.
ಆ	ಬಂದಿದ್ದಲ್ಲಿ, ಇನ್ನೂ ಆರ್ಥಿಕ ಇಲಾಖೆ ಅನುಮೋದನೆ ನೀಡದಿರಲು ಕಾರಣವೇನು; ಮತ್ತು ಸರ್ಕಾರ ಯಾವಾಗ ವಿವಿಧ ವೃಂದದ ಹುದ್ದೆಗಳಿಗೆ ನೇಮಕಾತಿ ಮಾಡಲಾಗುವುದು?	ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿ ಇರುತ್ತದೆ. ಈ ಮಧ್ಯೆ ಕೆಲವು ಅಂಶಗಳಿಗೆ ಮಾಹಿತಿಯನ್ನು ಕೋರಿದ್ದು, ಅದನ್ನು ಪಡೆಯಲು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ಸರ್ಕಾರದಿಂದ ದಿನಾಂಕ: 27.08.2021ರಂದು ಪತ್ರ ಬರೆಯಲಾಗಿದೆ. ಅವರಿಂದ ಸದರಿ ಅಂಶಗಳಿಗೆ ಮಾಹಿತಿಯನ್ನು ನಿರೀಕ್ಷಿಸಲಾಗಿದೆ.

ಸಂಖ್ಯೆ: AGRI-AUD/38/2021

(ಬಿ.ಸಿ.ಪಾಟೀಲ್)
ಕೃಷಿ ಸಚಿವರು